ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 03/03/2020

# ಪ್ರಾಧ್ಯಾಪಕರಿಗೂ ಪಿಂಚಣಿಗೆ ವಿಧೇಯಕ

ಉದಯವಾಣಿ 3/3/20

ಬೆಂಗಳೂರು: ರಾಜ್ಯದ ವಿಶ್ವವಿದ್ಯಾಲಯ ಹಾಗೂ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಯುಜಿಸಿ ವೇತನ ಪಡೆಯುತ್ತಿರುವ ಸರ್ಕಾರಿ ಪ್ರಾಧ್ಯಾಪಕರುಗಳಿಗೆ ರಾಜ್ಯ ಸರ್ಕಾರಿ ನೌಕರರಿಗೆ ನೀಡುವ ಮಾನದಂಡದಡಿ ಪಿಂಚಣಿ ನೀಡಲು ರಾಜ್ಯ ಸರ್ಕಾರ ವಿಧೇಯಕ ಮಂಡಿಸಿದೆ. ವಿಧಾನ ಸಭೆಯಲ್ಲಿ ಕಾನೂನು ಸಚಿವ ಜೆ.ಸಿ. ಮಾಧುಸ್ವಾಮಿ ವಿಧೇಯಕ ಮಂಡಿಸಿದ್ದು, ವಿವಿಗಳು ಹಾಗೂ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರಿ ಹಾಗೂ ಅನುದಾನಿತ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪ್ರಾಧ್ಯಾಪಕರು ಯುಜಿಸಿ ವೇತನ ಪಡೆಯುತ್ತಿದ್ದು ಅದೇ ಮಾದರಿಯಲ್ಲಿ ಪಿಂಚಣಿಯನ್ನೂ ನೀಡುವಂತೆ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದರು. ಆದರೆ, ಪಿಂಚಣಿವ್ಯವಸ್ಥೆಯು ರಾಜ್ಯ ಸರ್ಕಾರದ ವ್ಯಾಪ್ತಿಗೆ ಒಳಪಡುವುದರಿಂದ ರಾಜ್ಯ ಸರ್ಕಾರ ತನ್ನ ನೌಕರರಿಗೆ ನೀಡುವ ಪಿಂಚಣಿ ಮಾದರಿಯ ಲ್ಲಿಯೇ ಯುಜಿಸಿ ವೇತನ ಪಡೆಯುತ್ತಿರುವ ಪ್ರಾಧ್ಯಾ ಪಕರಿಗೂ ಅನ್ವಯವಾಗುವಂತೆ ಸೂಕ್ತ ಕಾನೂನು ರೂಪಿಸಲು ವಿಧೇಯಕ ಮಂಡಿಸಿದೆ

7